## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 812 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸಬೇಕಾದ ದಿನಾಂಕ | : | 24/02/2023 |
| ಉತ್ತರಿಸಬೇಕಾದವರು | : | ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ | ವಿಷಯ | ಉತ್ತರ |
|---|---|---|
| ಅ) | ರಾಷ್ಟ್ರೀಯ ಶಿಕ್ಷಣ ನೀತಿ 2020 ನ್ನು ರಾಜ್ಯ ಸರ್ಕಾರವು ಅನುಷ್ಠಾನಗೊಳಿಸುತ್ತಿರುವುದು ನಿಜವೇ; ಹಾಗಿದ್ದಲ್ಲಿ ಪ್ರಸ್ತುತ ಯಾವ ಹಂತದಲ್ಲಿ ಇದೆ; (ವಿವರ ನೀಡುವುದು) | ರಾಷ್ಟ್ರೀಯ ಶಿಕ್ಷಣ ನೀತಿ 2020 ರ ಅನುಷ್ಠಾನ ಕುರಿತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ಅನುಷ್ಠಾನ ಯೋಜನೆಯನ್ನು ಸಿದ್ಧಪಡಿಸಿ ಕ್ರಮವಹಿಸುತ್ತಿದೆ.<br>ಕ್ರೈಸ್ ವ್ಯಾಪ್ತಿಯ ವಸತಿ ಶಾಲೆಗಳಲ್ಲಿ ರಾಜ್ಯ ಪಠ್ಯ ಕ್ರಮವನ್ನು ಅನುಸರಿಸಲಾಗುತ್ತಿದೆ. ಪ್ರಸ್ತುತ 6 ರಿಂದ 12ನೇ ತರಗತಿಯವರೆಗೆ ರಾಷ್ಟ್ರೀಯ ಪಠ್ಯಕ್ರಮ ಹಾಗೂ ರಾಜ್ಯ ಪಠ್ಯಕ್ರಮ ರಚನೆಯಾಗಿರುವುದಿಲ್ಲ. ರಾಷ್ಟ್ರೀಯ ಶಿಕ್ಷಣ ನೀತಿ 2020 ರ ಪ್ರಕಾರ ಪಠ್ಯಕ್ರಮವನ್ನು ಸರ್ಕಾರದ ನಿರ್ದೇಶನದಂತೆ ವಸತಿ ಶಾಲೆಗಳಲ್ಲಿಯೂ ಅಳವಡಿಸಲು ಕ್ರಮವಹಿಸಲಾಗುವುದು. |
| ಆ) | ರಾಷ್ಟ್ರೀಯ ಶಿಕ್ಷಣ ನೀತಿ 2020 ರನ್ವಯ 9 ಮತ್ತು 10ನೇ ತರಗತಿಗಳಿರುವ ಶಾಲೆಗಳನ್ನು ಕಡ್ಡಾಯವಾಗಿ 11 ಮತ್ತು 12ನೇ (ಪಿ.ಯು.ಸಿ) ತರಗತಿಗಳನ್ನು ಪ್ರಾರಂಭಿಸಬೇಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು). | ಸರ್ಕಾರದ ಪರಿಶೀಲನೆಯಲ್ಲಿದೆ. |
| ಇ) | 2022-23ನೇ ಸಾಲಿನಲ್ಲಿ ಎಷ್ಟು ವಸತಿ ಶಾಲೆಗಳಲ್ಲಿ ಪಿ.ಯು.ಸಿ. ತರಗತಿಗಳನ್ನು ಪ್ರಾರಂಭಿಸಲಾಗಿದೆ; ಯಾವ ಕಾಲಮಿತಿಯೊಳಗೆ ರಾಷ್ಟ್ರೀಯ ಶಿಕ್ಷಣ ನೀತಿ 2020 ರಂತೆ ಎಲ್ಲಾ ಶಾಲೆಗಳನ್ನು ಪಿ.ಯು.ಸಿ. ತರಗತಿಗಳಿಗೆ ಮೇಲ್ದರ್ಜೆಗೇರಿಸಲಾಗುವುದು? (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ 804 ವಸತಿ ಶಾಲೆಗಳು ಹಾಗೂ 26 ಸ್ವತಂತ್ರ ಪದವಿ ಪೂರ್ವ ವಿಜ್ಞಾನ ಕಾಲೇಜುಗಳು ಸೇರಿ ಒಟ್ಟು 830 ವಸತಿ ಶಾಲಾ/ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. 804 ವಸತಿ ಶಾಲೆಗಳ ಪೈಕಿ 58 ವಸತಿ ಶಾಲೆಗಳಲ್ಲಿ ಪಿ.ಯು.ಸಿ.ತರಗತಿಗಳನ್ನು ಪ್ರಾರಂಭಿಸಲಾಗಿದೆ. ಈ ಪೈಕಿ 2022-23ನೇ ಸಾಲಿನಲ್ಲಿ 5 ವಸತಿ ಶಾಲೆಗಳಲ್ಲಿ ಪ್ರಥಮ ಪಿ.ಯು.ಸಿ. ತರಗತಿಗಳನ್ನು ಪ್ರಾರಂಭಿಸಲಾಗಿದೆ.<br>ಉಳಿದ ಶಾಲೆಗಳನ್ನು ಪ್ರಥಮ ಪಿ.ಯು.ಸಿ. ತರಗತಿಗಳಿಗೆ ಮೇಲ್ದರ್ಜೆಗೇರಿಸಲು ಅನುದಾನದ ಲಭ್ಯತೆಗೆ ಅನುಗುಣವಾಗಿ ಕ್ರಮವಹಿಸಲಾಗುವುದು. |

ಸಕಇ 23 ಎಂಡಿಎಸ್ 2023

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು